ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2001-2002 ನೇ ಭಾಗದ ಹಣಕಾಸು ವರ್ಷದಲ್ಲಿ ಸಂಚಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ಪೂಹಿಸುವುದಕ್ಕಾಗಿ ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 204ನೇ ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಎಸ್.ಎಂ. ಕೃಷ್ಣ
ಮುಖ್ಯಮಂತ್ರಿಗಳು ಹಾಗೂ
ಹಣಕಾಸುಸಚಿವರು.

ಯಾಕೊಬ್ ಪರೀಖ್
ಕಾರ್ಯದರ್ಶಿ

(ಆ) ಕರ್ನಾಟಕ ಧನವಿನಿಯೋಗ ವಿಧೇಯಕ, 2001 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ *